# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಕರ್ನಾಟಕ ರಾಜ್ಯ ಕಡಲ ತೀರ ವಲಯ ನಿರ್ವಹಣಾ ಪ್ರಾಧಿಕಾರದಿಂದ ನೀಡಲಾಗುವ ನಿರಾಕ್ಷೇಪಣಾ ಪತ್ರಗಳ ಪರಿಷ್ಕರಿಸುವ ಪ್ರಸ್ತಾವನೆಗಳಿಗೆ ಪರಿಷ್ಕರಣಾ ಶುಲ್ಕವನ್ನು ವಿಧಿಸುವ ಬಗ್ಗೆ.

**ಓದಲಾಗಿದೆ:**
1. ಕೇಂದ್ರ ಸರ್ಕಾರದ ಪರಿಸರ ಮತ್ತು ಅರಣ್ಯ ಮಂತ್ರಾಲಯದ ಅಧಿಸೂಚನೆ ಸಂಖ್ಯೆ: ಎಸ್.ಓ.19(ಇ), ದಿನಾಂಕ: 06.01.2011.
2. ಕೇಂದ್ರ ಸರ್ಕಾರದ ಪರಿಸರ ಮತ್ತು ಅರಣ್ಯ ಮಂತ್ರಾಲಯದ ಅಧಿಸೂಚನೆ ಸಂಖ್ಯೆ: ಎಸ್.ಓ.2980(ಇ), ದಿನಾಂಕ: 30.09.2013.
3. ಕರ್ನಾಟಕ ರಾಜ್ಯ ಕಡಲ ತೀರ ವಲಯ ನಿರ್ವಹಣಾ ಪ್ರಾಧಿಕಾರದ ಸಭಾ ನಡವಳಿಯ ದಿನಾಂಕ: 11.06.2014.

* * * * *

**ಪ್ರಸ್ತಾವನೆ:**

ಕಡಲ ತೀರ ವಲಯದ ಸಂರಕ್ಷಣೆಯ ದೃಷ್ಟಿಯಿಂದ ಕೇಂದ್ರ ಸರ್ಕಾರವು ಪರಿಸರ (ಸಂರಕ್ಷಣಾ) ಕಾಯಿದೆ, 1986ರ ಅಡಿಯಲ್ಲಿ ಮೇಲೆ (1) ರಲ್ಲಿ ಓದಲಾದ ಕಡಲ ತೀರ ವಲಯ ನಿಯಂತ್ರಣಾ ಅಧಿಸೂಚನೆಯನ್ನು ಹೊರಡಿಸಿರುತ್ತದೆ. ಈ ಅಧಿಸೂಚನೆಯ ಅಂಶಗಳ ಅನುಪಾಲನೆಯನ್ನು ಖಾತ್ರಿ ಪಡಿಸಿಕೊಳ್ಳುವುದಕ್ಕಾಗಿ ಮೇಲೆ (2)ರಲ್ಲಿ ಓದಲಾದ ಅಧಿಸೂಚನೆಯ ಅನುಸಾರ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆಯವರ ಅಧ್ಯಕ್ಷತೆಯಲ್ಲಿ ಕರ್ನಾಟಕ ರಾಜ್ಯ ಕಡಲ ತೀರ ವಲಯ ನಿರ್ವಹಣಾ ಪ್ರಾಧಿಕಾರವನ್ನು ಕೇಂದ್ರ ಅರಣ್ಯ ಮತ್ತು ಪರಿಸರ ಮಂತ್ರಾಲಯ ರಚಿಸಿ ಅಧಿಸೂಚನೆಯನ್ನು ಹೊರಡಿಸಿರುತ್ತದೆ. ಈ ಪ್ರಾಧಿಕಾರದಿಂದ ಕಡಲ ತೀರ ಪ್ರದೇಶಗಳಲ್ಲಿ ಅಭಿವೃದ್ಧಿ ಕಾಮಗಾರಿಗಳಿಗೆ ಸಂಬಂಧಿಸಿದ ಹಾಗೆ ನಿರಾಕ್ಷೇಪಣಾ ಪತ್ರವನ್ನು ಪಡೆಯಲು ಹಲವಾರು ಪ್ರಸ್ತಾವನೆಗಳು ಬರುತ್ತಿದ್ದು, ಇವುಗಳನ್ನು ಪರಿಶೀಲಿಸಲು ಪರಿಷ್ಕರಣಾ ಶುಲ್ಕವನ್ನು ವಿಧಿಸುವುದು ಸೂಕ್ತವೆಂದು ಪರಿಗಣಿಸಲಾಗಿದ್ದು, ಈ ಬಗ್ಗೆ ಮೇಲೆ ಓದಲಾದ (3) ರಲ್ಲಿ ದಿನಾಂಕ: 11.06.2014 ರಂದು ನಡೆದ ಕರ್ನಾಟಕ ರಾಜ್ಯ ಕಡಲ ತೀರ ವಲಯ ನಿರ್ವಹಣಾ ಪ್ರಾಧಿಕಾರದ ಸಭೆಯಲ್ಲಿ ಚರ್ಚಿಸಲಾಗಿದ್ದು, ಕರ್ನಾಟಕ ರಾಜ್ಯದಲ್ಲಿಯೂ ಸಹ ವಸತಿ ಮತ್ತು ವಾಣಿಜ್ಯ ಉದ್ದೇಶಗಳ ಕಟ್ಟಡಗಳು ಹಾಗೂ ಕೈಗಾರಿಕೆಗಳ ನಿರ್ಮಾಣಗಳಿಗೆ ಸಂಬಂಧಿಸಿದಂತೆ, ಅರ್ಜಿ ಪರಿಷ್ಕರಣಾ ಶುಲ್ಕವನ್ನು (Processing Fees) ವಿಧಿಸಲು ತೀರ್ಮಾನಿಸಲಾಗಿದೆ. ಅದರಂತೆ ಈ ಆದೇಶ.

## ಸರ್ಕಾರಿ ಆದೇಶ ಸಂಖ್ಯೆ: ಅಪಜೀ 1062 ಸಿಆರ್‌ಜೆಡ್ 2014

## ಬೆಂಗಳೂರು, ದಿನಾಂಕ: 16.01.2015.

ಪ್ರಸ್ತಾವನೆಯಲ್ಲಿ ತಿಳಿಸಿದ ಅಂಶಗಳ ಹಿನ್ನೆಲೆಯಲ್ಲಿ ಕೇಂದ್ರ ಸರ್ಕಾರದ ಪರಿಸರ ಮತ್ತು ಅರಣ್ಯ ಮಂತ್ರಾಲಯದ ಅಧಿಸೂಚನೆ ಸಂಖ್ಯೆ: ಎಸ್.ಓ.19(ಇ), ದಿನಾಂಕ: 06.01.2011ರಂತೆ ಹೊರಡಿಸಲಾಗಿರುವ ಕಡಲ ತೀರ ವಲಯ ನಿಯಂತ್ರಣಾ ಅಧಿಸೂಚನೆಯಂತೆ ಕರ್ನಾಟಕ ರಾಜ್ಯ ಕಡಲ

ತೀರ ವಲಯ ನಿರ್ವಹಣಾ ಪ್ರಾಧಿಕಾರದಿಂದ ವಿವಿಧ ವಸತಿ ಹಾಗೂ ವಸತಿಯೇತರ ಕಟ್ಟಡಗಳು ಹಾಗೂ ಕೈಗಾರಿಕೆಗಳ ಸ್ಥಾಪನೆಗೆ ನಿರಾಕ್ಷೇಪಣಾ ಪತ್ರವನ್ನು ಪಡೆಯುವ ಪ್ರಸ್ತಾವನೆಗಳಿಗೆ ಈ ಕೆಳಕಂಡಂತೆ ಅರ್ಜಿ ಪರಿಷ್ಕರಣಾ ಶುಲ್ಕ (Application Processing Fees)ವನ್ನು ವಿಧಿಸಲು ಆದೇಶಿಸಲಾಗಿದೆ.

1. **ವಸತಿ ಘಟಕಗಳು:**

| ಕಟ್ಟಡದ ವಿಸ್ತೀರ್ಣ ಚದರ ಅಡಿಯಲ್ಲಿ (Plinth Area) | ವಸತಿ ಘಟಕಗಳ ಪರಿಶೀಲನಾ/ ನಿರ್ವಹಣಾ ಶುಲ್ಕ (ರೂ.ಗಳಲ್ಲಿ) |
|---|---|
| 1000 ಚದರ ಅಡಿ ವರೆಗೆ | ರೂ. 100.00 |
| 1000 ಚದರಿ ಅಡಿ ಮೇಲೆ | ರೂ. 500.00 |

2. **ವಾಣಿಜ್ಯ ಘಟಕಗಳು:**

| ಬಂಡವಾಳ ವೆಚ್ಚ (ವಾಣಿಜ್ಯ ಯೋಜನೆಗಳು) | ವಾಣಿಜ್ಯ ಘಟಕಗಳ ಪರಿಶೀಲನಾ/ ನಿರ್ವಹಣಾ ಶುಲ್ಕ (ರೂ.ಗಳಲ್ಲಿ) |
|---|---|
| ರೂ. 1 ಕೋಟಿ ವರೆಗೆ | ರೂ. 50,000.00 |
| ರೂ. 1 ಕೋಟಿಯಿಂದ 5 ಕೋಟಿವರೆಗೆ | ರೂ. 1 ಲಕ್ಷ |
| ರೂ. 5 ಕೋಟಿಯಿಂದ 50 ಕೋಟಿವರೆಗೆ | ರೂ. 2 ಲಕ್ಷ |
| ರೂ. 50 ಕೋಟಿಯಿಂದ 100 ಕೋಟಿವರೆಗೆ | ರೂ. 5 ಲಕ್ಷ |
| ರೂ. 100 ಕೋಟಿ ಮೇಲೆ | ರೂ. 10 ಲಕ್ಷ |

ಪ್ರಸ್ತಾಪಿತ ಶುಲ್ಕವನ್ನು ಲೆಕ್ಕಶೀರ್ಷಿಕೆ; 0406-02-800-0-02 Fees under Coastal Zone Management ಅಡಿಯಲ್ಲಿ ಸಂದಾಯ ಮಾಡುವಂತೆ ಆದೇಶಿಸಲಾಗಿದೆ.

ಸದರಿ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 693 ವೆಚ್ಚ-5/ 2014, ದಿನಾಂಕ: 17.12.2014 ರಲ್ಲಿನ ಸಹಮತಿಯೊಂದಿಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಜಿ. ಹೆಚ್. ಅನಸೂಯಮ್ಮ) 16/1/15
ಸರ್ಕಾರದ ಅಧೀನ ಕಾರ್ಯದರ್ಶಿ,
(ಪರಿಸರ ಮತ್ತು ಜೀವಿಶಾಸ್ತ್ರ)
ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ.

**ಇವರಿಗೆ,**

1. ಸಂಕಲನಾಕಾರರು, ಕರ್ನಾಟಕ ರಾಜ್ಯ ಪತ್ರ, ಸರ್ಕಾರಿ ಮುದ್ರಣಾಲಯ, ಬೆಂಗಳೂರು ಇವರನ್ನು ವಿಶೇಷ ಸಂಚಿಕೆಯಲ್ಲಿ ಪ್ರಕಟಿಸಲು ಹಾಗೂ 250 ಪ್ರತಿಗಳನ್ನು ಇಲಾಖೆಗೆ ಕಳುಹಿಸಲು ಕೋರಿದೆ.

.... 3

2. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
3. ಸರ್ಕಾರದ ಮುಖ್ಯ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
5. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಪಶುಸಂಗೋಪನಾ ಹಾಗೂ ಮೀನುಗಾರಿಕೆ ಇಲಾಖೆ, ವಿಕಾಸ ಸೌಧ, ಬೆಂಗಳೂರು.
6. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ವಾಣಿಜ್ಯ ಮತ್ತು ಕೈಗಾರಿಕಾ ಇಲಾಖೆ, ವಿಕಾಸ ಸೌಧ, ಬೆಂಗಳೂರು.
7. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಪ್ರವಾಸೋದ್ಯಮ ಇಲಾಖೆ, ವಿಕಾಸ ಸೌಧ, ಬೆಂಗಳೂರು.
8. ಸರ್ಕಾರದ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ (ವೆಚ್ಚ), ವಿಧಾನ ಸೌಧ, ಬೆಂಗಳೂರು.
9. ಸದಸ್ಯ ಕಾರ್ಯದರ್ಶಿ, ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ, ನಂ. 49, ಪರಿಸರ ಭವನ, ಚರ್ಚ್ ಸ್ಟ್ರೀಟ್, ಬೆಂಗಳೂರು – 560 003.
10. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ 4 ಮತ್ತು 5), ವಿಧಾನ ಸೌಧ, ಬೆಂಗಳೂರು.

ಪ್ರತಿಗಳು:

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು ಇವರ ಆಪ್ತ ಕಾರ್ಯದರ್ಶಿಗಳು.
2. ಸರ್ಕಾರದ ಕಾರ್ಯದರ್ಶಿಗಳು (ಪರಿಸರ ಮತ್ತು ಜೀವಿಶಾಸ್ತ್ರ), ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು ಇವರ ಆಪ್ತ ಕಾರ್ಯದರ್ಶಿಗಳು.
3. ವಿಶೇಷ ನಿರ್ದೇಶಕರು (ತಾಂತ್ರಿಕ ಕೋಶ), ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು ಇವರ ಆಪ್ತ ಸಹಾಯಕರು.
4. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.